ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ದೂರವಾಣಿ:080-22343904/05

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು-01, ದಿನಾಂಕ: 24.11.2016

ಸಂಖ್ಯೆ:ಕಾಶಿಇ/ಶೈವಿ/149/ಕ್ರೀಡೆ/2016-17

# ಸುತ್ತೋಲೆ

ವಿಷಯ: ಇಲಾಖಾ ವ್ಯಾಪ್ತಿಯ ಸರ್ಕಾರಿ ಪದವಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಒಳಾಂಗಣ ಹಾಗೂ ಹೊರಾಂಗಣ ಕ್ರೀಡಾ ಚಟುವಟಿಕೆಗಳಲ್ಲಿ ಭಾಗವಹಿಸುವ ಬಗ್ಗೆ.

ಉಲ್ಲೇಖ: 1) ಮಾನ್ಯ ಆಯುಕ್ತರ ಟಿಪ್ಪಣಿ ಸಂ:ಕಾಶಿಇ/01/ಆಆಶಾ/2016-17,ದಿ:11.11.2016.
2) ದಿನಾಂಕ:04.09.2015ರ ಈ ಕಛೇರಿಯ ದೈಹಿಕ ಶಿಕ್ಷಣ ಕೈಪಿಡಿ ಸಂಖ್ಯೆ:ಕಾಶಿಇ/13/ದೈ.ಶಿ.ಕೈಪಿಡಿ/2013-14/ಶೈವಿ-2,
3) ಈ ಕಛೇರಿಯ ಇದೇ ಕ್ರಮಾಂಕದ ಸುತ್ತೋಲೆ ದಿನಾಂಕ:22.10.2013.

* * * * * * * * *

ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ವಿದ್ಯಾರ್ಥಿಗಳಲ್ಲಿ ದೈಹಿಕ ಮತ್ತು ಆರೋಗ್ಯ ಶಿಕ್ಷಣದ ಅರಿವು ಮೂಡಿಸುವ ಮತ್ತು ಕ್ರೀಡಾ ಮನೋಭಾವವನ್ನು ಬೆಳೆಸುವ ನಿಟ್ಟಿನಲ್ಲಿ ಕೈಗೊಳ್ಳಬೇಕಾಗಿರುವ ಕ್ರಮಗಳ ಕುರಿತು ಉಲ್ಲೇಖಿತ-2ರ ದೈಹಿಕ ಶಿಕ್ಷಣ ಕೈಪಿಡಿಯಲ್ಲಿ ಈಗಾಗಲೇ ಸ್ಪಷ್ಟ ಮಾರ್ಗಸೂಚಿಗಳನ್ನು ಜಾರಿಗೊಳಿಸಲಾಗಿರುತ್ತದೆ ಮತ್ತು ಉಲ್ಲೇಖಿತ-3ರ ಕಛೇರಿಯ ಸುತ್ತೋಲೆಯಲ್ಲಿ ಕಾಲೇಜಿನ ಪಾಠ-ಪ್ರವಚನಗಳ ಜೊತೆಗೆ ಪ್ರತಿದಿನ ಕನಿಷ್ಠ 30 ನಿಮಿಷಗಳ ಅವಧಿಯ ಕ್ರೀಡಾ ಚಟುವಟಿಕೆಗಳನ್ನು ನಡೆಸಲು ಅನುಕೂಲವಾಗುವಂತೆ ಕಾಲೇಜಿನ ಎಲ್ಲಾ ತರಗತಿಗಳ ದಿನನಿತ್ಯದ ಬೋಧನಾ ವೇಳಾಪಟ್ಟಿಯಲ್ಲಿ ಸಮಯ ನಿಗದಿಪಡಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿರುತ್ತದೆ.

ಮುಂದುವರೆದು, ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿನ ದೈಹಿಕ ಶಿಕ್ಷಣ ನಿರ್ದೇಶಕರುಗಳು ವಿದ್ಯಾರ್ಥಿಗಳಿಗೆ ಹೊರಾಂಗಣ ಕ್ರೀಡೆಗಳಾದ ಅಥ್ಲೆಟಿಕ್ಸ್, ವಾಲಿಬಾಲ್, ಬ್ಯಾಸ್ಕೆಟ್‌ಬಾಲ್, ಕಬಡ್ಡಿ, ಕ್ರಿಕೆಟ್, ಬ್ಯಾಡ್‌ಮಿಂಟನ್, ಖೋಖೋ, ಹ್ಯಾಂಡ್‌ಬಾಲ್, ಫುಟ್‌ಬಾಲ್ ಇತ್ಯಾದಿ ಹಾಗೂ ಒಳಾಂಗಣ ಕ್ರೀಡೆಗಳಾದ ಚೆಸ್, ಕೇರಮ್, ಟೇಬಲ್ ಟೆನ್ನಿಸ್, ಯೋಗ ಇತ್ಯಾದಿಗಳನ್ನು ಕಾಲೇಜು ಮಟ್ಟದಲ್ಲಿ ನಿರಂತರವಾಗಿ ಆಯೋಜಿಸಿ, ಹೆಚ್ಚಿನ ವಿದ್ಯಾರ್ಥಿಗಳನ್ನು ಪ್ರೇರೇಪಿಸಿ ಭಾಗವಹಿಸುವಂತೆ ಮಾಡುವುದು ಕಡ್ಡಾಯವಾಗಿರುತ್ತದೆ. ಸದರಿ ಕ್ರೀಡಾ ಚಟುವಟಿಕೆಗಳಲ್ಲಿ ಭಾಗವಹಿಸದೇ ಇರುವಂತಹ ವಿದ್ಯಾರ್ಥಿಗಳು ಸ್ವಚ್ಛ ಭಾರತ ಅಭಿಯಾನ, ಟ್ರೆಕ್ಕಿಂಗ್ ಅಥವಾ ಮ್ಯಾರಾಥಾನ್‌ಗಳಲ್ಲಿ ಯಾವುದಾದರೊಂದು ಚಟುವಟಿಕೆಯಲ್ಲಿ ಸಕ್ರಿಯವಾಗಿ ಭಾಗವಹಿಸುವುದು. ಕಾಲೇಜಿನ ಎಲ್ಲಾ ಕ್ರೀಡಾ ಚಟುವಟಿಕೆಗಳು ಹಾಗೂ ಸಂಬಂಧಿತ ಸಾಧನೆಗಳನ್ನು ಕಾಲೇಜಿನ ವೆಬ್‌ಸೈಟ್‌ನಲ್ಲಿ ಕಡ್ಡಾಯವಾಗಿ ಪ್ರಕಟಿಸುವುದು.

2015-16 ಹಾಗೂ 2016-17ನೇ ಸಾಲಿನಲ್ಲಿ ರಾಷ್ಟ್ರೀಯ ಹಾಗೂ ಅಂತರರಾಷ್ಟ್ರೀಯ ಮಟ್ಟದ ಕ್ರೀಡೆಗಳಲ್ಲಿ ಭಾಗವಹಿಸಿ, ಇದುವರೆವಿಗೂ ಸಾಧನೆ ಮಾಡಿರುವಂತಹ ಪ್ರತಿಭಾನ್ವಿತ ವಿದ್ಯಾರ್ಥಿಗಳ ಪಟ್ಟಿಯನ್ನು ಇಲಾಖಾ ವೆಬ್‌ಸೈಟಿನಲ್ಲಿ ಪ್ರಕಟಿಸಿರುವ Google Form ಮೂಲಕ ದಿನಾಂಕ: 15.12.2016ರೊಳಗೆ ಈ ಕಛೇರಿಗೆ ಸಲ್ಲಿಸುವುದು.

ಕಾಲೇಜು ಶಿಕ್ಷಣ ನಿರ್ದೇಶಕರು

**ಇವರಿಗೆ:**

1) ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಗುಲ್ಬರ್ಗ- ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ
2) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.(ಸಂಬಂಧಿಸಿದ ಪ್ರಾದೇಶಿಕ ಜಂಟಿ ನಿರ್ದೇಶಕರ ಮೂಲಕ)

**ಪ್ರತಿಯನ್ನು:**

1) ಮಾನ್ಯ ಆಯುಕ್ತರ, ನಿರ್ದೇಶಕರ, ಹೆಚ್ಚುವರಿ ನಿರ್ದೇಶಕರ, ಮುಖ್ಯ ಆಡಳಿತಾಧಿಕಾರಿಗಳ ಹಾಗೂ ಜಂಟಿ ನಿರ್ದೇಶಕರ ಆಪ್ತಶಾಖೆಗೆ, ಕೇಂದ್ರ ಕಛೇರಿ, ಬೆಂಗಳೂರು.
2) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು (ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಮತ್ತು ಮಾಹಿತಿ ಸಂಗ್ರಹಿಸಲು)
3) ಶ್ರೀ ಶ್ರೀಕಾಂತ್, ಸಮನ್ವಯಾಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು - ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.
4) ಕಛೇರಿ ಪ್ರತಿ.